**Bangalore**
**Regional News**
**17.10.2025: 14.30hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<u>ಮುಖ್ಯಾಂಶಗಳು:</u>**

1. ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೃಷಿ ಸಂಸ್ಕರಣೆಗೆ ಒತ್ತಾಸೆ ನೀಡುವ ಕೇಂದ್ರಕ್ಕೆ ಸಚಿವೆ ನಿರ್ಮಲಾ ಸೀತಾರಾಮನ್ ಚಾಲನೆ
2. ರಾಜ್ಯದಲ್ಲಿ ೩೫ ಸಾವಿರ ಸರ್ಕಾರಿ ಉದ್ಯೋಗ ನೇಮಕಕ್ಕೆ ಅನುಮೋದನೆ - ಮುಖ್ಯಮಂತ್ರಿ ಸಿದ್ದರಾಮಯ್ಯ
3. ತಲಕಾವೇರಿಯಲ್ಲಿ ಕಾವೇರಿ ತೀರ್ಥೋದ್ಭವ; ಘಟನೆಗೆ ಸಾಕ್ಷಿಯಾದ ಸಾವಿರಾರು ಶ್ರದ್ಧಾಳುಗಳು
4. ರೈಲ್ವೆ ಇಲಾಖೆಯ ಮೇರಿ ಸಹೇಲಿ ಯೋಜನೆಯಡಿ ೨ ಲಕ್ಷಕ್ಕೂ ಅಧಿಕ ಮಹಿಳಾ ಪ್ರಯಾಣಿಕರಿಗೆ ಸುರಕ್ಷತೆ

*********

ಕಲ್ಯಾಣ ಕರ್ನಾಟಕದಲ್ಲಿ ಕೃಷಿ ಸಂಸ್ಕರಣೆಗೆ ಒತ್ತಾಸೆ ನೀಡುವ ಹುಣಸೆ ಮತ್ತು ಶೇಂಗಾ ಸಂಸ್ಕರಣ ಘಟಕ ಮತ್ತು ರೈತ ತರಬೇತಿ ಕೇಂದ್ರವನ್ನು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಇಂದು ಲೋಕಾರ್ಪಣೆ ಮಾಡಿದರು. ನಬಾರ್ಡ್ ಸಹಯೋಗದಲ್ಲಿ ಕೇಂದ್ರ ಸರ್ಕಾರದಿಂದ ಕೂಡ್ಲಿಗಿ ತಾಲೂಕಿನ ಕಸಪುರ ಗ್ರಾಮದಲ್ಲಿ ೪೩೫ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಈ ಕೇಂದ್ರವನ್ನು ಸ್ಥಾಪಿಸಲಾಗಿದೆ.ಈ ಸಂದರ್ಭದಲ್ಲಿ ನಿರ್ಮಲಾ ಸೀತಾರಾಮನ್ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದ ಹೆಬ್ಬಾಗಿಲಾದ ಗುಡೆಕೋಟೆಯ ಕಸಪುರ ಗ್ರಾಮದಲ್ಲಿ ನಿರ್ಮಾಣಗೊಂಡಿರುವ ಹುಣಸೆ ಮತ್ತು ಶೇಂಗಾ ಸಂಸ್ಕರಣಾ ಘಟಕ ಉದ್ಘಾಟಿಸಲಾಗಿದ್ದು, ಎಲ್ಲ ರೈತರು ಇದರ ಪ್ರಯೋಜನ ಪಡೆಯಬೇಕು ಎಂದರು. ಕೇಂದ್ರ ಸರ್ಕಾರದಿಂದ ಅಪೌಷ್ಟಿಕತೆ ನಿರ್ಮೂಲನೆಗೆ ಪೋಷಣ್ ಮಾಸಾಚರಣೆ ಗರ್ಭಿಣಿ ಬಾಣಂತಿಯರಿಗಾಗಿ ಮಾತೃ ವಂದನಾ ಯೋಜನೆ ಬೇಟಿ ಬಚಾವೋ ಭೇಟಿ ಬಡಾವೋ ಎಂಬ ಅನೇಕ ಜನಪ್ರಿಯ ಯೋಜನೆಗಳಿವೆ ಅದರ ಸದುಪಯೋಗವನ್ನು ಈ ಕಲ್ಯಾಣ ಕರ್ನಾಟಕ ಭಾಗದ ಜನತೆ ಪ್ರಯೋಜನ ಪಡೆಯಬೇಕು ಎಂದರು. ಸಂಸ್ಕರಣ ಘಟಕವನ್ನು ವೀಕ್ಷಿಸಿ ಅದರ ಕಾರ್ಯ ನಿರ್ವಹಣೆ ಕುರಿತು ಮಾಹಿತಿ ಪಡೆದುಕೊಂಡರು.ವಿಜಯನಗರ ಜಿಲ್ಲೆ ಕಸಾಪುರ ಗ್ರಾಮದಲ್ಲಿ ಸಂಸದರ ಪ್ರದೇಶಾಭಿವೃದ್ಧಿ ಅನುದಾನ ಯೋಜನೆಯಡಿ ಈ ಕೇಂದ್ರವನ್ನು

ಸ್ಥಾಪಿಸಲಾಗಿದೆ. ಯಾವುದೇ ಸರ್ಕಾರವಿರಲಿ ದೇಶದ ಎಲ್ಲ ಭಾಗದ ಜನರನ್ನು ಅಭಿವೃದ್ಧಿ ಪಥದತ್ತ ಕೊಂಡೊಯ್ಯುವುದು ಪ್ರಧಾನಿ ನರೇಂದ್ರ ಮೋದಿಯವರ ಸರ್ಕಾರದ ಆದ್ಯತೆಯಾಗಿದೆ ಎಂದು ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದರು.

*********

ರಾಜ್ಯದಲ್ಲಿ ೩೫ ಸಾವಿರ ಸರ್ಕಾರಿ ಉದ್ಯೋಗ ನೇಮಕಕ್ಕೆ ಅನುಮೋದನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಆಯೋಜಿಸಿದ್ದ ಮೈಸೂರು ವಿಭಾಗದ ಬೃಹತ್ ಉದ್ಯೋಗ ಮೇಳ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಈ ಕಾರ್ಯಕ್ರಮದ ಉದ್ದೇಶ ನಿರುದ್ಯೋಗಿಗಳಿಗೆ ಉದ್ಯೋಗ ನೀಡಬೇಕೆಂಬುದಾಗಿದೆ. ಬಹಳಷ್ಟು ವಿದ್ಯಾರ್ಥಿ, ವಿದ್ಯಾರ್ಥಿನಿಯರುಗಳು ಪದವಿ ಪಡೆದ ನಂತರ ಉದ್ಯೋಗ ಸಿಗದೇ ಸಂಕಷ್ಟದಲ್ಲಿದ್ದಾರೆ, ಅವರಿಗೆ ಉದ್ಯೋಗ ನೀಡಲು ಕಂಪನಿಗಳ ಸಹಯೋಗದೊಂದಿಗೆ ಎಲ್ಲಾ ಜಿಲ್ಲೆಗಳಲ್ಲಿ ಉದ್ಯೋಗ ಮೇಳ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು. ಕಳೆದ ಎರಡು ವರ್ಷಗಳಲ್ಲಿ ೫೮ ಸಾವಿರದ ೫೯೮ ವಿದ್ಯಾರ್ಥಿಗಳು ನೋಂದಾವಣೆ ಮಾಡಿಕೊಂಡಿದ್ದಾರೆ. ಅದರಲ್ಲಿ ೧೧ ಸಾವಿರದ ೭೦೫ ವಿದ್ಯಾರ್ಥಿಗಳಿಗೆ ಉದ್ಯೋಗ ನೀಡಲಾಗಿದೆ. ೨೨ ಸಾವಿರದ ೮೯೦ ವಿದ್ಯಾರ್ಥಿಗಳು ಶಾರ್ಟ್ ಲಿಸ್ಟ್ ನಲ್ಲಿದ್ದಾರೆ. ಖಾಲಿ ಇರುವ ಸರ್ಕಾರಿ ಹುದ್ದೆಗಳಿಗೆ ನೇಮಕ ಮಾಡಿಕೊಳ್ಳಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಕಾರ್ಯಕ್ರಮದಲ್ಲಿ ಕೌಶಲ್ಯ ತರಬೇತಿ ಇಲಾಖೆ ಹಾಗೂ ವೈದ್ಯಕೀಯ ಇಲಾಖೆ ಸಚಿವ ಶರಣ ಪ್ರಕಾಶ್ ಪಾಟೀಲ್ ಅವರು ಮಾತನಾಡಿ, ಉದ್ಯೋಗ ಮೇಳ ಕಾರ್ಯಕ್ರಮಗಳನ್ನು ರಾಜ್ಯಾದ್ಯಂತ ನಡೆಸಲಾಗುತ್ತಿದೆ. ಇಂದಿನ ಉದ್ಯೋಗ ಮೇಳದಲ್ಲಿ ೨೨೦ ಕ್ಕೂ ಹೆಚ್ಚು ಕಂಪನಿಗಳು ಬಂದಿದ್ದು, ಈಗಾಗಲೇ ೧೨ ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ನೋಂದಣಿಯಾಗಿದ್ದಾರೆ ಎಂದು ತಿಳಿಸಿದರು.

*********

ಕೊಡಗು ಜಿಲ್ಲೆಯ ಬ್ರಹ್ಮಗಿರಿ ತಪ್ಪಲಿನಲ್ಲಿರುವ ತಲಕಾವೇರಿಯಲ್ಲಿಂದು ಕಾವೇರಿ ಪವಿತ್ರ ತೀರ್ಥೋದ್ಭವ ಸಹಸ್ರಾರು ಭಕ್ತರ ಹರ್ಷೋದ್ಗಾರಗಳೊಂದಿಗೆ ಜರುಗಿತು. ನಿಗದಿತ ಮುಹೂರ್ತವಾದ ಮಧ್ಯಾಹ್ನ ೧ ಗಂಟೆ ೪೪ ನಿಮಿಷಕ್ಕೆ ಸರಿಯಾಗಿ ತಲಕಾವೇರಿಯಲ್ಲಿನ ಪುಟ್ಟ ಕುಂಡಿಕೆಯಲ್ಲಿ ಹಾಲುಕ್ಕುವಂತೆ ಕಾವೇರಿ ತೀರ್ಥರೂಪಿಣಿಯಾದಾಗ ಶ್ರದ್ಧಾಳುಗಳು ಜಯಕಾರ ಹಾಕಿ ಸಂಭ್ರಮಿಸಿದರು. ಈ ಸಂದರ್ಭದಲ್ಲಿ ಕುಂಡಿಕೆಯಿಂದ ತೀರ್ಥ ಹೊರಚೆಲ್ಲದಂತೆ ಅರ್ಚಕ ವೃಂದ ತೀರ್ಥವನ್ನು ಭಕ್ತರ ಮೇಲೆ ಪ್ರೋಕ್ಷಣೆ ಮಾಡಿದರು. ಈ ವರ್ಷ ಮಧ್ಯಾಹ್ನವೇ ತೀರ್ಥೋದ್ಭವ

ಜರುಗಿದ್ದರಿಂದಾಗಿ ರಾಜ್ಯದ ವಿವಿಧೆಡೆಗಳಿಂದ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ತಲಕಾವೇರಿ ಕ್ಷೇತ್ರಕ್ಕೆ ಬಂದು ತೀರ್ಥೋದ್ಭವದ ಪುಣ್ಯ ಕ್ಷಣಗಳನ್ನು ವೀಕ್ಷಿಸಿದರು. ಸಂಸದ ಯದವೀರ್ ಒಡೆಯರ್, ಶಾಸಕರಾದ ಎ.ಎಸ್. ಪೊನ್ನಣ್ಣ, ಡಾ.ಮಂಥರ್ ಗೌಡ, ಜಿಲ್ಲಾಧಿಕಾರಿ ವೆಂಕಟರಾಜಾ ಸೇರಿದಂತೆ ಅನೇಕ ಗಣ್ಯರು ಹಾಜರಿದ್ದರು. ಪೊಲೀಸ್ ವರಿಷ್ಠಾಧಿಕಾರಿ ರಾಮರಾಜನ್ ನೇತೃತ್ವದಲ್ಲಿ ಪೊಲೀಸ್ ಬಂದೋಬಸ್ತ್ ಬಿಗಿಗೊಳಿಸಲಾಗಿತ್ತು.ಭಾಗಮಂಡಲದಿಂದ ತಲಕಾವೇರಿಗೆ ಭಕ್ತರನ್ನು ಉಚಿತವಾಗಿ ಕರೆದೊಯ್ಯಲು ೨೫ ಸರ್ಕಾರಿ ಬಸ್‌ಗಳನ್ನು ವ್ಯವಸ್ಥೆ ಮಾಡಲಾಗಿತ್ತು. ಇನ್ನೊಂದು ತಿಂಗಳ ಕಾಲ ತಲಕಾವೇರಿಯಲ್ಲಿ ಕಾವೇರಿ ಜಾತ್ರೋತ್ಸವದ ಸಂಭ್ರಮ ಕಂಡುಬರಲಿದೆ ಎಂದು ನಮ್ಮ ಕೊಡಗು ಪ್ರತಿನಿಧಿ ವರದಿ ಮಾಡಿದ್ದಾರೆ.

*********

ಇಂದು ಆಕಾಶವಾಣಿ ವಿವಿಧ ಭಾರತಿಯ ೫೫ನೇ ವರ್ಷದ ಆಚರಣೆ. ವಿವಿಧ ಭಾರತಿಗೆ ಸಂಭ್ರಮದಾರತಿ ಕಾರ್ಯಕ್ರಮವನ್ನು ಚಿತ್ರ ಸಾಹಿತಿ, ಸಂಗೀತ ನಿರ್ದೇಶಕ ಪೂರ್ಣಚಂದ್ರ ತೇಜಸ್ವಿ ಉದ್ಘಾಟಿಸಿದರು. ನಂತರ ಮಾತನಾಡಿದ ಅವರು, ಆಕಾಶವಾಣಿ ಒಂದು ಆಪ್ತ ಮಾಧ್ಯಮ ಕಾಲದ ಜೊತೆಗೆ ಹೊಂದಿಕೊಂಡು ಅದೇ ಗುಣಮಟ್ಟವನ್ನು ಉಳಿಸಿಕೊಂಡು ಹೋಗುತ್ತಿರುವ ಆಕಾಶವಾಣಿಗೆ ಅದರದ್ದೇ ಆದ ಶ್ರೋತೃಗಳು ಇದ್ದಾರೆ. ಉಳಿದ ಮಾಧ್ಯಮಗಳು ದಾರಿ ತಪ್ಪುತ್ತಿರುವ ಸಂದರ್ಭದಲ್ಲಿ ಜನರ ನಂಬಿಕೆಯನ್ನು ಉಳಿಸಿಕೊಂಡಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಬೆಂಗಳೂರು ದೂರದರ್ಶನ ಕೇಂದ್ರದ ಮುಖ್ಯಸ್ಥ ಭಾಗ್ಯವಾನ್, ಆಕಾಶವಾಣಿ ಕೇಂದ್ರದ ಮುಖ್ಯಸ್ಥ ಸಂಜೀವ್, ಕಾರ್ಯಕ್ರಮ ವಿಭಾಗದ ಮುಖ್ಯಸ್ಥ ಡಾ. ಶಂಕರ್‌ನಾರಾಯಣ, ಡಾ. ರಘು, ಶಿವಕುಮಾರ್ ಹಾಗೂ ನೂತನ್ ಎಸ್. ಕದಂ ಮಾತನಾಡಿದ ಪೂರ್ವಸೂರಿಗಳನ್ನು ನೆನಪಿಸಿಕೊಂಡರು. ಈ ಸಂದರ್ಭದಲ್ಲಿ ಎಲ್ಲಾ ಆರ್.ಜೆ.ಗಳಿಗೆ ಸ್ಮರಣಿಕೆ ನೀಡಿ, ಗೌರವಿಸಲಾಯಿತು.

*********

ಮಹಿಳೆಯರ ಸುರಕ್ಷತೆಗಾಗಿ ರೈಲ್ವೆ ಇಲಾಖೆ ಪ್ರಾರಂಭಿಸಿರುವ 'ಮೇರಿ ಸಹೇಲಿ' ಯೋಜನೆಯಡಿ ಇದುವರೆಗೆ ಎರಡು ಲಕ್ಷಕ್ಕೂ ಅಧಿಕ ಮಹಿಳಾ ಪ್ರಯಾಣಿಕರಿಗೆ ಸಂರಕ್ಷಣೆ ಒದಗಿಸಲಾಗಿದೆ. ರಾತ್ರಿ ಸಮಯದ ಪ್ರಯಾಣ, ಜನಸಂದಣಿ ಹೆಚ್ಚಿರುವ ನಿಲ್ದಾಣಗಳಲ್ಲಿ, ರೈಲು ಹತ್ತಿ ಇಳಿಯುವ ವೇಳೆ ಮಹಿಳೆಯರಿಗೆ ಆಗುತ್ತಿದ್ದ ತೊಂದರೆ ನಿವಾರಿಸಲು ೨೦೨೦ರಲ್ಲಿ ಭಾರತೀಯ ರೈಲ್ವೆ ಇಲಾಖೆ ಈ ಯೋಜನೆ ಆರಂಭಿಸಿದೆ.ಈ ವರ್ಷ ೪ ಸಾವಿರದ ೮೬೯ ರೈಲುಗಳಲ್ಲಿ ಕಾರ್ಯಾಚರಣೆ ಕೈಗೊಂಡು ೨ ಲಕ್ಷದ ೮ ಸಾವಿರದ ೮೬೯ ಒಂಟಿ ಮಹಿಳಾ ಪ್ರಯಾಣಿಕರಿಗೆ ಈ ತಂಡ ರಕ್ಷಣೆ ನೀಡಿದೆ" ಎಂದು ನೈರುತ್ಯ ರೈಲ್ವೆ ಮುಖ್ಯ ಸಾರ್ವಜನಿಕ ಸಂಪರ್ಕಾಧಿಕಾರಿ ಡಾ. ಮಂಜುನಾಥ ಕನಮಡಿ ಹೇಳಿದ್ದಾರೆ.

*********

ದೀಪದ ಹಬ್ಬ ದೀಪಾವಳಿ ಸಂದರ್ಭದಲ್ಲಿ ಜನರು ಅತ್ಯಂತ ಜಾಗರೂಕತೆಯಿಂದ ಸಂಭ್ರಮಾಚರಣೆ ಮಾಡುವುದು ಅತ್ಯವಶ್ಯಕವಾಗಿದೆ. ಚಿಕ್ಕಪುಟ್ಟ ಮಕ್ಕಳು ಸೇರಿದಂತೆ ಹಿರಿಯರು ಹಸಿರು ಪಟಾಕಿ ಹಚ್ಚಿ ಸಂಭ್ರಮಿಸುವುದು ಸಾಮಾನ್ಯವಾಗಿದೆ. ಈ ಸಂದರ್ಭದಲ್ಲಿ ಅನುಸರಿಸಬೇಕಾದ ಜಾಗರೂಕತೆ ಬಗ್ಗೆ ಬೆಂಗಳೂರು ನಾರಾಯಣ ನೇತ್ರಾಲಯದ ನಿರ್ದೇಶಕ ಹಾಗೂ ಕ್ಯಾಟ್ರ್ಯಾಕ್ ಸರ್ಜನ್ ಡಾ. ನರೇನ್ ಶೆಟ್ಟಿ ಮಾಹಿತಿ ನೀಡಿದ್ದಾರೆ.

****ಧ್ವನಿ***ನರೇನ್ ಶೆಟ್ಟಿ (೩೦ ಸೆಕೆಂಡ್ಸ್)

ಕಣ್ಣಿನ ಸುರಕ್ಷತೆ ದೃಷ್ಟಿಯಿಂದ ಕನ್ನಡಕ ಧರಿಸಿ ಪಟಾಕಿ ಹಚ್ಚುವುದು ಅಗತ್ಯವೆಂದು ಅವರು ತಿಳಿಸಿದ್ದಾರೆ.

*********

ರಾಜ್ಯದಲ್ಲಿ ತೆರಿಗೆ ವಂಚಿಸಿ ಓಡಾಡುತ್ತಿರುವ ಪಾಂಡಿಚೇರಿ ನೋಂದಣಿ ವಾಹನಗಳ ಸಂಚಾರ ತಡೆಗಟ್ಟಲು ವಿಶೇಷ ತಂಡಗಳನ್ನು ರಚಿಸಲಾಗಿದೆ. ಯಾದಗಿರಿ ಜಿಲ್ಲೆಯಲ್ಲಿ ಈಗಾಗಲೇ ಮೂರು ಪಾಂಡಿಚೇರಿ ವಾಹನಗಳಿಂದ ೫ ಲಕ್ಷ ರೂಪಾಯಿಗೂ ಅಧಿಕ ದಂಡ ಹಾಗೂ ತೆರಿಗೆ ವಸೂಲು ಮಾಡಲಾಗಿದೆ ಎಂದು ಧಾರವಾಡ ಹೆಚ್ಚುವರಿ ಪ್ರಾದೇಶಿಕ ಆಯುಕ್ತ ಕೆ.ಟಿ ಹಾಲಸ್ವಾಮಿ ತಿಳಿಸಿದ್ದಾರೆ. ಅವರು, ಯಾದಗಿರಿಯಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿ ಕರ್ಕಶ ಶಬ್ದ ಉಂಟುಮಾಡುವ, ಮಾಲಿನ್ಯ ಉಂಟು ಮಾಡುವ, ಪ್ರಕಾಶಮಾನವಾದ ದೀಪಗಳನ್ನು ಬಳಸುವ, ಪರವಾನಗಿ ಇಲ್ಲದೇ ಅನಧಿಕೃತವಾಗಿ ಸಂಚಾರ ಮಾಡುತ್ತಿರುವ, ಪರವಾನಗಿ ಇಲ್ಲದೆ ಪಟಾಕಿಗಳನ್ನು ಸಾಗಿಸುವ ಅನಧಿಕೃತ ವಾಹನಗಳ ವಿರುದ್ಧ ಈಗಾಗಲೇ ಕಾರ್ಯಾಚರಣೆ ಆರಂಭಿಸಲಾಗಿದೆ ಎಂದು ಹೇಳಿದರು.

*********

ಅಂಗಾಂಗ ಮತ್ತು ದೇಹ ದಾನದಲ್ಲಿ ರಾಜ್ಯ ದೇಶದಲ್ಲಿಯೇ ಎರಡನೇ ಸ್ಥಾನದಲ್ಲಿದ್ದು, ಈ ಬಗ್ಗೆ ಕೇಂದ್ರ ಸರ್ಕಾರದ ಆರೋಗ್ಯ ಸಮಿತಿ ಸಭೆ ಪ್ರಶಂಸೆ ವ್ಯಕ್ತಪಡಿಸಿದೆ ಎಂದು ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಹೇಳಿದ್ದಾರೆ. ಆರ್‌ಬಿಐನ ಅಂಗಸಂಸ್ಥೆಯಾದ ಮೈಸೂರಿನ ಬ್ಯಾಂಕ್ ನೋಟ್ ಪೇಪರ್ ಮಿಲ್ ಬಿಎನ್‌ಪಿಎಂಐನ ಸಿಎಸ್‌ಆರ್ ನಿಧಿಯಡಿ ದಾವಣಗೆರೆಯ ಜಿಲ್ಲಾ ಸರ್ಕಾರಿ ಆಸ್ಪತ್ರೆಗೆ ೧ ಕೋಟಿ ೫೦ ಲಕ್ಷ ರೂಪಾಯಿ ಮೌಲ್ಯದ ವೈದ್ಯಕೀಯ ಉಪಕರಣಗಳ ಹಸ್ತಾಂತರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಬುಧವಾರ ನಡೆದ ಕೇಂದ್ರ ಸರ್ಕಾರದ ಆರೋಗ್ಯ ಸಮಿತಿ

ಸಭೆಯಲ್ಲಿ ಪ್ರಶಂಸನೀಯ ಮಾತುಗಳು ಕೇಳಿಬಂದಿವೆ. ಮಾನವೀಯ ಮೌಲ್ಯಗಳು ಇರುವ ಕಾರ್ಯ ರಾಜ್ಯದಲ್ಲಿ ನಡೆಯತ್ತಿದೆ. ಅಂಗಾಂಗ ದಾನದ ಬಗ್ಗೆ ಸಾಕಷ್ಟು ಜನರಿಗೆ ಜ್ಞಾನದ ಕೊರತೆ ಇದೆ. ಆದ್ದರಿಂದ ಈ ಬಗ್ಗೆ ಅಭಿಯಾನ ಆರಂಭಿಸಬೇಕಿದೆ ಎಂದು ಹೇಳಿದರು.

*********

ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳ ಮೇಲೆ ತೋರಿದ ಅಗೌರವ ಪ್ರಕರಣಕ್ಕೆ ಸಂಬಂಧಿಸಿದಂತೆ ಕೋಲಾರ ಜಿಲ್ಲೆಯಲ್ಲಿಂದು ಜನಪರ ಸಂಘಟನೆಗಳಿಂದ ಪ್ರತಿಭಟನೆ ನಡೆದಿದೆ. ಜಿಲ್ಲಾದ್ಯಂತ ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ.

*****END****